# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ. ಹೆಚ್. ರಸ್ತೆ, ತುಮಕೂರು - 572 103

ದೂರವಾಣಿ : 0816-2254546, 0816-2255596, 0816-2255597 ಫ್ಯಾಕ್ಸ್ : 0816-2270719

ಸಂಖ್ಯೆ:ತುವಿ:ಶೈವಿ:2018-19: 392 ದಿನಾಂಕ:22.05.2018

## ಅಧಿಸೂಚನೆ

**ವಿಷಯ** : 2018-19 ನೇ ಶೈಕ್ಷಣಿಕ ಸಾಲಿನ ವಿವಿಧ ಸ್ನಾತಕ ಪದವಿ ಕೋರ್ಸುಗಳ ಶೈಕ್ಷಣಿಕ ವೇಳಾಪಟ್ಟಿ ಕುರಿತು.

**ಉಲ್ಲೇಖ** : 1) ಸರ್ಕಾರದ ಆದೇಶದ ಸಂಖ್ಯೆ:ಇಡಿ 292 ಯುಎನ್ಇ 2016 ದಿನಾಂಕ:28.07.2016

2) ಶೈಕ್ಷಣಿಕ ವೇಳಾಪಟ್ಟಿ ಸಮಿತಿಯ ಸಭೆಯ ದಿನಾಂಕ:09.05.2018

3) ಮಾನ್ಯ ಕುಲಸಚಿವರು (ಮೌಲ್ಯಮಾಪನ) ಇವರ ಮನವಿ ಪತ್ರ ಸಂಖ್ಯೆ: ತುವಿ:ಪ.ವಿ:2018-19/224 ದಿನಾಂಕ :19.05.2018

4) ಮಾನ್ಯ ಕುಲಪತಿಯವರ ಅನುಮೋದನೆಯ (ಕಂಡಿಕೆ-20) ದಿನಾಂಕ:21.05.2018

****

2018-19 ನೇ ಶೈಕ್ಷಣಿಕ ಸಾಲಿನ ವಿವಿಧ ಸ್ನಾತಕ ಪದವಿ ಕೋರ್ಸುಗಳ ಶೈಕ್ಷಣಿಕ ವೇಳಾಪಟ್ಟಿಯನ್ನು ಉಲ್ಲೇಖ (1) ರ ಸರ್ಕಾರದ ಏಕರೂಪ ವೇಳಾಪಟ್ಟಿ, ಉಲ್ಲೇಖ (2) ರ ಸಮಿತಿಯ ವರದಿ, ಉಲ್ಲೇಖ (3) ರ ಮಾನ್ಯ ಕುಲಸಚಿವರು(ಮೌ) ಇವರ ಮನವಿಯ ಮೇರೆಗೆ ಹಾಗೂ ಉಲ್ಲೇಖ (4) ರ ಮಾನ್ಯ ಕುಲಪತಿಯವರ ಅನುಮೋದನೆಯನ್ವಯ ಈ ಕೆಳಕಂಡಂತೆ ನಿಗದಿಪಡಿಸಲಾಗಿದೆ.

### I, III, V, VII & IX ನೇ ಸೆಮಿಸ್ಟರ್

| ಕ್ರಮ ಸಂಖ್ಯೆ | ಶೈಕ್ಷಣಿಕ ವೇಳಾಪಟ್ಟಿ | ದಿನಾಂಕ |
|---|---|---|
| 01. | ಕಾಲೇಜುಗಳ ಪುನರಾರಂಭ ಮತ್ತು ಅಧ್ಯಾಪಕರುಗಳು ಕರ್ತವ್ಯಕ್ಕೆ ವರದಿ ಮಾಡಿಕೊಳ್ಳುವುದು | 18.06.2018 |
| 02. | I, III, V, VII & IX ನೇ ಸೆಮಿಸ್ಟರ್ ತರಗತಿಗಳ ಪ್ರಾರಂಭ | 22.06.2018 |
| 03. | ದಂಡ ಶುಲ್ಕವಿಲ್ಲದೆ ಪ್ರವೇಶ ಪಡೆಯಲು ಕೊನೆಯ ದಿನಾಂಕ | 13.07.2018 * |
| 04. | ರೂ.1000/- ಗಳ ದಂಡದೊಂದಿಗೆ ಪ್ರವೇಶ ಪಡೆಯಲು ಕೊನೆಯ ದಿನಾಂಕ | 31.07.2018 |
| 05. | ಪ್ರವೇಶ ಪಟ್ಟಿಗಳನ್ನು ತ್ರಿಪ್ರತಿಗಳಲ್ಲಿ ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸಲು ಕೊನೆಯ ದಿನಾಂಕ | 23.08.2018 |
| 06. | I, III, V, VII & IX ನೇ ಸೆಮಿಸ್ಟರ್ ತರಗತಿಗಳ ಮುಕ್ತಾಯ | 15.10.2018 |
| 07. | ರಜಾ ದಿನ | 18.10.2018 ರಿಂದ 10.12.2018 ರವರೆಗೆ |
| 08. | ಪ್ರಾಯೋಗಿಕ ಪರೀಕ್ಷೆಗಳು | 03.10.2018 ರಿಂದ 17.10.2018 ರವರೆಗೆ |
| 09. | I, III, V, VII & IX ನೇ ಸೆಮಿಸ್ಟರ್ ಸೈದ್ಧಾಂತಿಕ ಪರೀಕ್ಷೆಗಳ ಪ್ರಾರಂಭ | 22.10.2018 |

* ದ್ವಿತೀಯ ಪಿ.ಯು.ಸಿ. ಪೂರಕ ಪರೀಕ್ಷೆಯಲ್ಲಿ ಉತ್ತೀರ್ಣರಾದ ವಿದ್ಯಾರ್ಥಿಗಳಿಗೆ ಪ್ರವೇಶಾತಿ ದಿನಾಂಕವನ್ನು ಅವಶ್ಯವಿದ್ದಲ್ಲಿ ಹತ್ತು ದಿನಗಳವರೆಗೆ ವಿಸ್ತರಿಸಬಹುದು.

### II, IV, VI, VIII & X ನೇ ಸೆಮಿಸ್ಟರ್

| ಕ್ರಮ ಸಂಖ್ಯೆ | ಶೈಕ್ಷಣಿಕ ವೇಳಾಪಟ್ಟಿ | ದಿನಾಂಕ |
|---|---|---|
| 01. | II, IV, VI, VIII & X ನೇ ಸೆಮಿಸ್ಟರ್ ತರಗತಿಗಳ ಪ್ರಾರಂಭ | 17.12.2018 |
| 02. | II, IV, VI, VIII & X ನೇ ಸೆಮಿಸ್ಟರ್ ತರಗತಿಗಳ ಮುಕ್ತಾಯ | 13.04.2019 |
| 03. | ರಜಾ ದಿನ | 14.04.2019 ರಿಂದ 02.06.2019 ರವರೆಗೆ |
| 04. | ಪ್ರಾಯೋಗಿಕ ಪರೀಕ್ಷೆಗಳು | 01.04.2019 ರಿಂದ 13.04.2019 ರವರೆಗೆ |
| 05. | II, IV, VI, VIII & X ನೇ ಸೆಮಿಸ್ಟರ್ ಸೈದ್ಧಾಂತಿಕ ಪರೀಕ್ಷೆಗಳ ಪ್ರಾರಂಭ | 15.04.2019 |

# VII, VIII, IX & X ನೇ ಸೆಮಿಸ್ಟರ್‌ಗಳು ಬಿ.ಎಫ್.ಎ./ಬಿ.ವಿ.ಎ. ಹಾಗೂ ಬಿ.ಎ. ಇಂಟಿಗ್ರೇಟೆಡ್ ಕನ್ನಡ ಪಂಡಿತ್ ಪದವಿ ಕೋರ್ಸುಗಳಿಗೆ ಮಾತ್ರ ಅನ್ವಯಿಸುತ್ತದೆ.

# ಸೂಚನೆಗಳು

1. ವಿಶ್ವವಿದ್ಯಾನಿಲಯದಿಂದ ಸಂಯೋಜನೆ ಪಡೆಯದ ಯಾವುದೇ ಕಾಲೇಜು ವಿದ್ಯಾರ್ಥಿಗಳನ್ನು ಕೋರ್ಸು/ವಿಷಯಗಳಿಗೆ ಪ್ರವೇಶಾತಿ ಮಾಡಿಕೊಳ್ಳತಕ್ಕದ್ದಲ್ಲ ಮತ್ತು ಪಠ್ಯಕ್ರಮ ಹಾಗೂ ವಿನಿಯಮ ಅನುಮೋದನೆಗೊಳ್ಳದ ಕೋರ್ಸು/ವಿಷಯಗಳಿಗೆ ಪ್ರವೇಶಾತಿ ಮಾಡಿಕೊಳ್ಳತಕ್ಕದ್ದಲ್ಲ.
2. ವಿದ್ಯಾರ್ಥಿಗಳ ಪ್ರವೇಶಾತಿಯನ್ನು ವಿನಿಯಮಕ್ಕನುಗುಣವಾಗಿ ಹಾಗೂ ವಿಶ್ವವಿದ್ಯಾನಿಲಯವು ಕಾಲಕಾಲಕ್ಕೆ ಹೊರಡಿಸುವ ಮಾರ್ಗಸೂಚಿಗಳನ್ವಯ ಮಾಡಿಕೊಳ್ಳುವುದು ಸಂಬಂಧಿಸಿದ ಕಾಲೇಜುಗಳ ಪ್ರಾಂಶುಪಾಲರು ಅಥವಾ ಸಂಸ್ಥೆಯ ಮುಖ್ಯಸ್ಥರ ಪೂರ್ಣ ಜವಾಬ್ದಾರಿಯಾಗಿರುತ್ತದೆ ಮತ್ತು ನಿಯಮಗಳಿಗೆ ವಿರುದ್ಧವಾಗಿ ಮಾಡಿಕೊಳ್ಳಲಾಗುವ ಪ್ರವೇಶಾತಿಯು ಅಮಾನ್ಯವಾಗುತ್ತದೆ.
3. **ಹೊರ ರಾಜ್ಯದಲ್ಲಿ ದ್ವಿತೀಯ ಪಿ.ಯು.ಸಿ. ಪೂರೈಸಿರುವ ಎಲ್ಲಾ ವಿದ್ಯಾರ್ಥಿಗಳು ಕಡ್ಡಾಯವಾಗಿ ಅರ್ಹತಾ ಪ್ರಮಾಣ ಪತ್ರಕ್ಕಾಗಿ ನಿಗದಿತ ನಮೂನೆಯೊಂದಿಗೆ ಅಂಕಪಟ್ಟಿಗಳು, ಕ್ಯುಮ್ಯೂಲೇಟಿವ್ ರೆಕಾರ್ಡ್ ಹಾಗೂ ಇತರೆ ಅವಶ್ಯ ದಾಖಲಾತಿಗಳನ್ನು ಲಗತ್ತಿಸಿ ಅರ್ಜಿ ಸಲ್ಲಿಸುವುದು. ಅರ್ಹತಾ ಪ್ರಮಾಣ ಪತ್ರ ಒದಗಿಸದ ಹೊರ ರಾಜ್ಯದ ವಿದ್ಯಾರ್ಥಿಗಳನ್ನು ಯಾವುದೇ ಕಾರಣಕ್ಕೂ ಪ್ರವೇಶಾತಿ ಮಾಡಿಕೊಳ್ಳತಕ್ಕದಲ್ಲ.**

   **ಹೊರ ದೇಶಗಳ ವಿದ್ಯಾರ್ಥಿಗಳನ್ನು ಪ್ರವೇಶಾತಿ ಮಾಡಿಕೊಳ್ಳುವಾಗ ಈ ಕೆಳಕಂಡ ದಾಖಲಾತಿಗಳನ್ನು ಪಡೆಯತಕ್ಕದ್ದು.**
   a. **ಅರ್ಹತಾ ಪ್ರಮಾಣ ಪತ್ರ**
   b. **ವಿದ್ಯಾರ್ಥಿಯ ವೀಸಾ**
   c. **ಸಕ್ಷಮ ಪ್ರಾಧಿಕಾರವು ನೀಡಿರುವ A.I.D.S. ಮುಕ್ತ ಪ್ರಮಾಣ ಪತ್ರ**
4. ಎರಡು ವರ್ಷಗಳ ಪಿ.ಯು.ಸಿ. ಕೋರ್ಸು ಅಥವಾ ತತ್ಸಮಾನ ಕೋರ್ಸನ್ನು ಪೂರ್ಣಗೊಳಿಸದ (10+02) ಯಾವುದೇ ವಿದ್ಯಾರ್ಥಿಯು ಸ್ನಾತಕ ಪದವಿ ಕೋರ್ಸುಗಳಿಗೆ ಪ್ರವೇಶಾತಿ ಪಡೆಯಲು ಅರ್ಹನಲ್ಲ.
5. ವಿಶ್ವವಿದ್ಯಾನಿಲಯ/ರಾಜ್ಯ ಸರ್ಕಾರವು ನಿಗದಿಪಡಿಸಿರುವ ಪ್ರವೇಶಮಿತಿಗಿಂತ ಹೆಚ್ಚಾಗಿ ಪ್ರವೇಶಾತಿ ಮಾಡಿಕೊಳ್ಳತಕ್ಕದ್ದಲ್ಲ. ಒಂದು ವೇಳೆ ಮಾಡಿಕೊಂಡಲ್ಲಿ ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಅಧಿನಿಯಮ 2000 ರ ಪ್ರಕರಣ 59(18) ರನ್ವಯ ಅಂತಹ ಪ್ರವೇಶಾತಿಯು ಅಮಾನ್ಯವಾಗುತ್ತದೆ.
6. ವಿದ್ಯಾರ್ಥಿಯು ಪ್ರವೇಶ ಪಡೆದಿರುವ ಕೋರ್ಸಿಗೆ ಸಂಬಂಧಿಸಿದ ವಿನಿಯಮ, ಕನಿಷ್ಠ ಹಾಜರಾತಿ ಮತ್ತು ಪರೀಕ್ಷಾ ಸ್ವರೂಪವನ್ನು ಪ್ರತೀ ವರ್ಷ ವಿದ್ಯಾರ್ಥಿಗಳು ಪ್ರವೇಶಾತಿ ಪಡೆಯುವ ಸಂದರ್ಭದಲ್ಲಿ ವಿದ್ಯಾರ್ಥಿಗಳ ಗಮನಕ್ಕೆ ತರುವುದು ಹಾಗೂ ಅನುಸರಣಾ ವರದಿಯನ್ನು ಪ್ರವೇಶ ಪಟ್ಟಿಯೊಂದಿಗೆ ಸಲ್ಲಿಸುವುದು.
7. ವಿಶ್ವವಿದ್ಯಾನಿಲಯದಿಂದ ಪೂರ್ವಾನುಮತಿ ಪಡೆಯದೇ ಯಾವುದೇ ವರ್ಗಾವಣೆ ಪ್ರವೇಶವನ್ನು ಮಾಡಿಕೊಳ್ಳತಕ್ಕದ್ದಲ್ಲ.
8. ಕಾಲೇಜುಗಳು ಆಯಾ ವರ್ಷಗಳಲ್ಲಿ ನಿಗದಿಪಡಿಸುವ ಕೊನೆಯ ದಿನಾಂಕದೊಳಗೆ ಎಲ್ಲಾ ಪ್ರವೇಶಾತಿಗಳನ್ನು ಮಾಡಿಕೊಳ್ಳತಕ್ಕದ್ದು. ಯಾವುದೇ ಕಾರಣಕ್ಕೂ ವಿಶ್ವವಿದ್ಯಾನಿಲಯವು ನಿಗದಿಪಡಿಸಿದ ಕೊನೆಯ ದಿನಾಂಕದ ನಂತರ ಪ್ರವೇಶಾತಿ ಮಾಡಿಕೊಳ್ಳತಕ್ಕದ್ದಲ್ಲ. ಒಂದು ವೇಳೆ ನಿಗದಿಪಡಿಸಿದ ಕೊನೆಯ ದಿನಾಂಕದ ನಂತರ ಪ್ರವೇಶಾತಿ ಮಾಡಿಕೊಂಡಲ್ಲಿ ಅಂತಹ ಪ್ರವೇಶಾತಿಯು ಅಮಾನ್ಯವಾಗುತ್ತದೆ.
9. **ಪ್ರಾಂಶುಪಾಲರು/ಸಂಸ್ಥೆಯ ಮುಖ್ಯಸ್ಥರು ಪ್ರವೇಶಾತಿ ಪಟ್ಟಿಯನ್ನು ಶುಲ್ಕ ಪಾವತಿ ರಶೀದಿಯೊಂದಿಗೆ ತ್ರಿಪ್ರತಿಗಳಲ್ಲಿ ದಿನಾಂಕ:23.08.2018 ರೊಳಗೆ ಮಾನ್ಯ ಕುಲಸಚಿವರು / ಹಣಕಾಸು ಅಧಿಕಾರಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು ಇವರಿಗೆ ಸಲ್ಲಿಸುವುದು. ಕಾಲೇಜಿನ ಅಧಿಕಾರಿಗಳು ಶೈಕ್ಷಣಿಕ ವಿಭಾಗಕ್ಕೆ ನಿಗದಿತ ದಿನಾಂಕದಂದು ಎಲ್ಲಾ ಅವಶ್ಯ ದಾಖಲಾತಿಗಳನ್ನು ಒದಗಿಸುವುದು. ಪ್ರಾಂಶುಪಾಲರು/ಸಂಸ್ಥೆಯ ಮುಖ್ಯಸ್ಥರು ಪ್ರವೇಶಾತಿ ಪಟ್ಟಿಯನ್ನು ಸಲ್ಲಿಸುವ ಸಂದರ್ಭದಲ್ಲಿ ಎಲ್ಲಾ ವಿದ್ಯಾರ್ಥಿಗಳ ಪ್ರವೇಶಾತಿಯನ್ನು ವಿಶ್ವವಿದ್ಯಾನಿಲಯದ ವಿನಿಯಮಗಳಿಗನುಗುಣವಾಗಿ ಮಾಡಿಕೊಳ್ಳಲಾಗಿದೆ ಎಂದು ದೃಢೀಕರಿಸುವುದು ಹಾಗೂ ಅನುಸರಣಾ ವರದಿಯನ್ನು ಅಧಿಸೂಚನೆಯ ಪ್ರಕರಣ 06 ರನ್ವಯ ಸಲ್ಲಿಸುವುದು.**

10. ಹೊರ ರಾಜ್ಯದಲ್ಲಿ ವ್ಯಾಸಂಗ ಮಾಡಿರುವ ವಿದ್ಯಾರ್ಥಿಗಳ ಪ್ರವೇಶಾತಿ ಪಟ್ಟಿಯನ್ನು ಅರ್ಹತಾ ಪ್ರಮಾಣ ಪತ್ರ ಹಾಗೂ ಇತರೆ ಅಗತ್ಯ ದಾಖಲಾತಿಗಳೊಂದಿಗೆ ಪ್ರತ್ಯೇಕವಾಗಿ ಸಲ್ಲಿಸತಕ್ಕದ್ದು. ಇಂತಹ ವಿದ್ಯಾರ್ಥಿಗಳ ಕ್ರಮ ಸಂಖ್ಯೆಯನ್ನು ಕರ್ನಾಟಕದೊಳಗೆ ವ್ಯಾಸಂಗ ಮಾಡಿರುವ ವಿದ್ಯಾರ್ಥಿಗಳ ನಂತರ ನಿರಂತರವಾಗಿ ನೀಡತಕ್ಕದ್ದು.

11. ಶೈಕ್ಷಣಿಕ ವೇಳಾಪಟ್ಟಿಯನ್ನು ಎಲ್ಲಾ ಸಿಬ್ಬಂದಿ ಮತ್ತು ವಿದ್ಯಾರ್ಥಿಗಳ ಗಮನಕ್ಕೆ ತರುವುದು.

12. ಶೈಕ್ಷಣಿಕ ವೇಳಾಪಟ್ಟಿಯಲ್ಲಿನ ಯಾವುದೇ ದಿನಾಂಕವು ರಜಾ ದಿನವೆಂದು ಘೋಷಿಸಲ್ಪಟ್ಟಲ್ಲಿ ಕಾರ್ಯಕ್ರಮಗಳು ಸದರಿ ದಿನಾಂಕದ ನಂತರದ ಕರ್ತವ್ಯದ ದಿನ ಪ್ರಾರಂಭಗೊಳ್ಳುತ್ತದೆ.

13. ಪ್ರವೇಶಾತಿ ಪಟ್ಟಿಯನ್ನು ತಡವಾಗಿ ಸಲ್ಲಿಸುವುದು ವಿಶ್ವವಿದ್ಯಾನಿಲಯವು ನಿಗದಿಪಡಿಸುವ ದಂಡನೆಗೆ ಒಳಪಟ್ಟಿರುತ್ತದೆ.

ಉಪಕುಲಸಚಿವರು
(ಶೈಕ್ಷಣಿಕ ವಿಭಾಗ)

ಗೆ,

ಪ್ರಾಂಶುಪಾಲರು, ಘಟಕ ಹಾಗೂ ಎಲ್ಲಾ ಸಂಯೋಜಿತ ಸ್ನಾತಕ ಪದವಿ ಕಾಲೇಜುಗಳು, ತುಮಕೂರು ವಿಶ್ವವಿದ್ಯಾನಿಲಯ ತುಮಕೂರು

**ಪ್ರತಿಗಳು:**

1. ಕುಲಸಚಿವರು(ಮೌಲ್ಯಮಾಪನ), ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು
2. ಕುಲಸಚಿವರು, ಮೈಸೂರು/ಬೆಂಗಳೂರು/ಕರ್ನಾಟಕ/ಕುವೆಂಪು/ಮಂಗಳೂರು/ದಾವಣಗೆರೆ/ಕರ್ನಾಟಕ ಮಹಿಳಾ ವಿಶ್ವವಿದ್ಯಾನಿಲಯ.
3. ಹಣಕಾಸು ಅಧಿಕಾರಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
4. ಡೀನರು, ಕಲಾ, ವಿಜ್ಞಾನ, ವಾಣಿಜ್ಯ ಮತ್ತು ಶಿಕ್ಷಣ ನಿಕಾಯ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
5. ಗ್ರಂಥಪಾಲಕರು, ತುಮಕೂರು ವಿಶ್ವವಿದ್ಯಾನಿಲಯ ತುಮಕೂರು.
6. ಎಲ್ಲಾ ವಿಭಾಗಗಳ ಉಪಕುಲಸಚಿವರು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
7. ಮುಖ್ಯಸ್ಥರು, ಬಿ.ಎಫ್.ಎ. ವಿಭಾಗ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
8. ಎನ್.ಎಸ್.ಎಸ್. ಕೋ-ಆರ್ಡಿನೇಟರ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
9. ಮಾನ್ಯ ಕುಲಪತಿಯವರ ಆಪ್ತ ಕಾರ್ಯದರ್ಶಿಗಳು, ತುಮಕೂರು ವಿಶ್ವವಿದ್ಯಾನಿಲಯ ತುಮಕೂರು.
10. ಮಾನ್ಯ ಕುಲಸಚಿವರ ಆಪ್ತ ಸಹಾಯಕರು, ತುಮಕೂರು ವಿಶ್ವವಿದ್ಯಾನಿಲಯ ತುಮಕೂರು.
11. ಕಚೇರಿ ಪ್ರತಿ